# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 14.12.2010**

## *ರಸ್ತೆ ನಾಮಕರಣ : ಸಾರ್ವಜನಿಕ ಆಕ್ಷೇಪಣೆಗೆ ಆಹ್ವಾನ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.36, (ಹಳೆಯ ವಾರ್ಡ್ ಸಂಖ್ಯೆ: 4) ಮತ್ತೀಕೆರೆ ಮೇಲು ಸೇತುವೆಗೆ ***"ಡಾ// ಶ್ಯಾಮಾಪ್ರಸಾದ್ ಮುಖರ್ಜಿ"*** ಎಂದು ನಾಮಕರಣ ಮಾಡಲು ದಿನಾಂಕ: 27.11.2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಆದುದರಿಂದ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಆಕ್ಷೇಪಣೆಗಳಿದ್ದಲ್ಲಿ ಈ ಪತ್ರಿಕಾ ಪ್ರಕಟಣೆ ಹೊರಡಿಸಲಾದ ದಿನಾಂಕದಿಂದ 30 ದಿನದೊಳಗೆ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು-02, ಇವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ತಿಳಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 14.12.2010**

## *ಗುತ್ತಿಗೆ ಅವಧಿ ಮುಗಿದಿದ್ದರೂ ಖಾಲಿ ಮಾಡದಿದ್ದಕ್ಕೆ ಪಾಲಿಕೆ ಕಾರ್ಯಾಚರಣೆ : ಪೆಟ್ರೋಲ್ ಬಂಕ್ ವಶ*

ಗುತ್ತಿಗೆ ಅವಧಿ ನವೀಕರಿಸಿಕೊಳ್ಳದ ಹಿಂದೂಸ್ಥಾನ್ ಪೆಟ್ರೋಲಿಯಂ ಬಂಕ್‌ನ ಸುಮಾರು 10 ಕೋಟಿ ರೂ. ಮೌಲ್ಯದ 8 ಸಾವಿರ ಚದರ ಅಡಿ ಪ್ರದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಶಪಡಿಸಿಕೊಂಡಿದೆ.

ಬೃ.ಬೆಂ.ಮ.ಪಾಲಿಕೆ 1997 ರಲ್ಲಿ ಹಿಂದೂಸ್ಥಾನ್ ಪೆಟ್ರೋಲಿಯಂಗೆ ಬಂಕ್ ಸ್ಥಾಪಿಸಲು ಜಯನಗರದ 5ನೇ ಬ್ಲಾಕ್‌ನಲ್ಲಿರುವ ಮಾರೇನಹಳ್ಳಿಯ 46ನೇ ಅಡ್ಡರಸ್ತೆಯಲ್ಲಿ 8 ಸಾವಿರ ಚದುರ ಅಡಿ ಪ್ರದೇಶವನ್ನು ವಾರ್ಷಿಕ 10.90 ಲಕ್ಷ ರೂ.ಗಳ ವಂತಿಗೆಯ ಕರಾರಿನ ಮೇಲೆ ಗುತ್ತಿಗೆ ನೀಡಿತ್ತು. ಆದರೆ ಗುತ್ತಿಗೆ ಅವಧಿ ಪೂರ್ಣಗೊಂಡು 3 ವರ್ಷಗಳು ಕಳೆದರೂ ಹಿಂದೂಸ್ಥಾನ್ ಪೆಟ್ರೋಲಿಯಂ ಗುತ್ತಿಗೆ ಅವಧಿಯನ್ನು ನವೀಕರಿಸಿಕೊಂಡಿರಲಿಲ್ಲ.

ಬೃ.ಬೆಂ.ಮ.ಪಾಲಿಕೆ ಈ ಬಗ್ಗೆ ಹಲವು ಬಾರೀ ನೋಟಿಸ್ ನೀಡಿದ್ದರೂ ಕಂಪೆನಿಯು ಯಾವುದೇ ಉತ್ತರವನ್ನು ನೀಡಿರಲಿಲ್ಲ.

ಈ ಹಿನ್ನೆಲೆಯಲ್ಲಿ ದಕ್ಷಿಣ ವಲಯದ ಮುಖ್ಯ ಅಭಿಯಂತರರಾದ ಶ್ರೀ ಅನಂತಸ್ವಾಮಿ ರವರ ನೇತೃತ್ವದ ತಂಡ ದಾಳಿ ನಡೆಸಿ, ಪೆಟ್ರೋಲ್ ಬಂಕ್ ಪ್ರದೇಶವನ್ನು ಮುಟ್ಟುಗೋಲು ಹಾಕಿಕೊಂಡಿತ್ತು.

ಸುಮಾರು 10 ಕೋಟಿ ರೂ. ಮೌಲ್ಯದ 8 ಸಾವಿರ ಚದರ ಅಡಿ ಪ್ರದೇಶವನ್ನು ವಶಪಡಿಸಿಕೊಂಡಿದ್ದು, ಇಂದೇ ಈ ಪ್ರದೇಶಕ್ಕೆ ತಡೆಗೋಡೆ ನಿರ್ಮಿಸಲಿದ್ದು, ಬೃ.ಬೆಂ.ಮ.ಪಾಲಿಕೆ ವ್ಯಾಪ್ತಿಯ ಪ್ರದೇಶವೆಂದು ನಾಮಫಲಕ ಹಾಕಲಾಗುವುದೆಂದು ಮುಖ್ಯ ಅಭಿಯಂತರರಾದ ಶ್ರೀ ಅನಂತಸ್ವಾಮಿ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 14.12.2010**

## ***ರಾಜಕಾಲುವೆ ಒತ್ತುವರಿ ತೆರವು : ಸುಮಾರು 10 ಕೋಟಿ ರೂ. ಆಸ್ತಿ ವಶ***

ರಾಜಕಾಲುವೆ ಒತ್ತುವರಿದಾರರ ವಿರುದ್ಧ ಸಮರ ಸಾರಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರೆಸಿದ್ದು, ಇಂದು ಚೊಕ್ಕಸಂದ್ರ ವಾರ್ಡ್‌ನಲ್ಲಿ 17 ನಿವಾಸಗಳು ಸೇರಿದಂತೆ 28 ವಾಣಿಜ್ಯ ಮಳಿಗೆಗಳನ್ನು ನೆಲಸಮಗೊಳಿಸುವ ಮೂಲಕ ಸುಮಾರು 10 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಪಾಲಿಕೆ ವಶಪಡಿಸಿಕೊಂಡಿದೆ.

ಪೀಣ್ಯ ಕೈಗಾರಿಕಾ ಪ್ರದೇಶ ವ್ಯಾಪ್ತಿಯ ಚೊಕ್ಕಸಂದ್ರ ವಾರ್ಡ್ ಟಿವಿಎಸ್ ಕ್ರಾಸ್ ಬಳಿ 31/2 ಎಕರೆ ಪ್ರದೇಶದಲ್ಲಿ ಒತ್ತುವರಿಯಾಗಿದ್ದ 630 ಮೀಟರ್ ರಾಜಕಾಲುವೆ ಪ್ರದೇಶವನ್ನು ವಶಪಡಿಸಿಕೊಳ್ಳಲಾಯಿತು. ಈ ಜಾಗದಲ್ಲಿ ಕೆ.ಐ.ಎ.ಡಿ.ಬಿ.ಯು ಅಕ್ರಮವಾಗಿ 28 ವಾಣಿಜ್ಯ ಮಳಿಗೆಗಳನ್ನು ನಿರ್ಮಾಣ ಮಾಡಿ ಬಾಡಿಗೆ ನೀಡಿತ್ತು. ಹಾಗೇ ಕೆಲ ಖಾಸಗಿ ವ್ಯಕ್ತಿಗಳು ರಾಜಕಾರಣಿಗಳಿಂದ ಕುಮ್ಮಕ್ಕು ಪಡೆದು 17 ಮನೆಗಳನ್ನು ನಿರ್ಮಿಸಿದ್ದರು. ಇಂದು ಬೆಳಿಗ್ಗೆ ಬಿ.ಎಂ.ಟಿ.ಎಫ್. ಪಡೆ ಹಾಗೂ ನೂರಕ್ಕೂ ಹೆಚ್ಚು ಪೋಲಿಸರೊಂದಿಗೆ ಆಗಮಿಸಿದ್ದ ಪಾಲಿಕೆಯ ಜಂಟಿ ಆಯುಕ್ತರಾದ ಶ್ರೀ ರಾಧಾಕೃಷ್ಣ ರವರು ಅಕ್ರಮವಾಗಿ ತಲೆ ಎತ್ತಿದ್ದ ಕಟ್ಟಡಗಳನ್ನು ನೆಲಸಮಗೊಳಿಸುವ ಕಾರ್ಯಾಚರಣೆಗೆ ಚಾಲನೆ ನೀಡಿದರು.

ರಾಜಕಾಲುವೆ ಒತ್ತುವರಿಯನ್ನು ತೆರವುಗೊಳಿಸುವಂತೆ ನ್ಯಾಯಾಲಯ ಆದೇಶ ನೀಡಿತ್ತು. ಅದರಂತೆ ಕಾರ್ಯಾಚರಣೆ ನಡೆಸಲಾಗುತ್ತಿದ್ದು, ಈ ಕಾರ್ಯಾಚರಣೆಗೆ 5 ಜೆಸಿಬಿ ಯಂತ್ರಗಳನ್ನು ಬಳಸಲಾಗಿದ್ದು, ಕಾರ್ಯಾಚರಣೆ ನಾಳೆಯು ಮುಂದುವರೆಯಲಿದೆ ಎಂದು ಅವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**